# ಹೊಳೆನರಸೀಪುರದ ಅಪರ ಜೆ.ಎಂ.ಎಫ್.ಸಿ. ರವರ ನ್ಯಾಯಾಲಯದಲ್ಲಿ.

## ಸಿ.ಸಿ. ನಂಃ 29/2015

| | | |
|---|---|---|
| ಸಾಕ್ಷಿಯ ಹೆಸರು | ಃ ಶಿವಕುಮಾರ್ ಪಿ. | ಸಿ.ಡಬ್ಲ್ಯೂ ಃ 18 |
| ತಂದೆ ಹೆಸರು | ಃ ಪದ್ಮರಾಜೇಗೌಡ | ಪಿ.ಡಬ್ಲ್ಯೂ ಃ 10 |
| ವಯಸ್ಸು | ಃ 39 ವರ್ಷ | ಪ್ರಮಾಣೀಕರಿಸಿದ ದಿಃ 28/03/2022 |
| ವೃತ್ತಿ | ಃ ಸಿ.ಪಿ.ಐ., ಕುಮಾರಸ್ವಾಮಿ ಲೇಔಟ್ ಪೋಲೀಸ್ ಠಾಣೆ | |
| ವಾಸ | ಃ ಬೆಂಗಳೂರು | |

ಸಾಕ್ಷಿಗೆ ಪ್ರಮಾಣ ವಚನ ಭೋಧಿಸಲಾಯಿತು.

ಮುಖ್ಯ ವಿಚಾರಣೆಃ- ಮಾನ್ಯ ಎ.ಪಿ.ಪಿ.ಯವರಿಂದಃ

ನಾನು ದಿನಾಂಕಃ 24.06.2012 ರಿಂದ ದಿನಾಂಕಃ 18.08.2014 ರವರೆಗೆ ಹೊಳೆನರಸೀಪುರದ ನಗರ ಪೋಲೀಸ್ ಠಾಣೆಯಲ್ಲಿ ಪಿ.ಎಸ್.ಐ. ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕಃ 28.05.2014 ರಂದು ಬೆಳಿಗ್ಗೆ 08.00 ಗಂಟೆ ಸಮಯದಲ್ಲಿ ನಾನು ಠಾಣಾ ಪ್ರಭಾರದಲ್ಲಿ ಇದ್ದಾಗಾ ಚಾಸಾ-1 ರವರು ಬಂದು ಲಿಖಿತ ದೂರನ್ನು ಸಲ್ಲಿಸಿದ್ದು ಅದರಂತೆ ಠಾಣಾ ಮು.ಸಂ. 154/2014 ಅನ್ನು ಆರೋಪಿಗಳ ವಿರುದ್ಧ ಭಾ.ದಂ.ಸಂ. 279, 337, 304(ಎ) ಸಹ ಕಲಂ 187 ಐ.ಎಂ.ವಿ. ಆಕ್ಟ್ ರೀತ್ಯಾ ದಾಖಲಿಸಿ ನನ್ನ ಅಧೀನ ಸಹದ್ಯೋಗಿ ಮುಖಾಂತರ ಮಾನ್ಯ ಘನ ನ್ಯಾಯಾಲಯಕ್ಕೆ ರವಾನಿಸಿರುತ್ತೇನೆ. ನಂತರ ಮುಂದಿನ ತನಿಖೆಗಾಗಿ ಚಾಸಾ-9 ರವರಿಗೆ ಪ್ರಕರಣದ ಕಡತವನ್ನು ಹಸ್ತಾಂತರಿಸಿರುತ್ತೇನೆ. ಸಾಕ್ಷಿ ಈಗ ಪ್ರ.ವ.ವರದಿಯಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ, ಸದರಿ ಪ್ರ.ವ.ವರದಿಯನ್ನು ನಿಪಿ-9 ಎಂದು, ಸಾಕ್ಷಿ ಸಹಿಯನ್ನು ನಿಪಿ-9(ಎ) ಎಂದು ಗುರುತಿಸಲಾಯಿತು. ಸಾಕ್ಷಿ ಚಾಸಾ-1 ರವರು ನೀಡಿದ ಲಿಖಿತ ದೂರನ್ನು ನೋಡಿ ಗುರುತಿಸಿದ್ದು, ಸದರಿ ದೂರನ್ನು ಈಗಾಗಲೇ ನಿಪಿ-1 ಎಂದು ಗುರುತಿಸಿದ್ದು, ಸಾಕ್ಷಿಯ ತನ್ನ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ 2 ನೇ ಆರೋಪಿ ಪರ ವಕೀಲರಾದ ಶ್ರೀ ಐ.ಎಲ್.ಎಸ್. ವಕೀಲರಿಂದಃ

ಚಾಸಾ-1 ರವರು ನಿಪಿ-1 ಅನ್ನು ಅವರೇ ಬರೆದುಕೊಂಡು ಬಂದಿದ್ದರು. ಆರೋಪಿ ಯಾವುದೇ ಕೃತ್ಯ ಎಸಗಿದೇ ಇದ್ದರೂ ಚಾಸಾ-1 ರವರಿಗೆ ಸಹಾಯ ಮಾಡಲು ಸುಳ್ಳು ಪ್ರಕರಣವನ್ನು ದಾಖಲು ಮಾಡಿರುತ್ತೇನೆ ಎಂದರೆ ಸರಿಯಲ್ಲ.

(1 ನೇ ಆರೋಪಿ ಪರ ವಕೀಲರು ಮೇಲ್ಕಂಡ 2 ನೇ ಆರೋಪಿ ಪರ ವಕೀಲರ ಪಾಟೀ ಸವಾಲನ್ನು 1 ನೇ ಆರೋಪಿ ಪಾಟಿ ಅಳವಡಿಸಿಕೊಂಡಿರುತ್ತಾರ.)

<u>ಮರು ವಿಚಾರಣೆ ಇಲ್ಲಃ</u>

(ಬಹಿರಂಗ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

**ಓ.ಹೇ.ಕೇ.ಸ.ಇ.**

ಅಪರ ಸಿವಿಲ್ ಜಡ್ಜ್ ಮತ್ತು ಜೆಎಂಎಫ್.ಸಿ,
ಹೊಳೆನರಸೀಪುರ